ಹೊಸ ನ್ಯಾಯಬೆಲೆ ಅಂಗಡಿ ತೆರೆಯುವುದು

431(948); ಡಾ॥ ಶಿವರಾಜ್ ಪಾಟೀಲ್ ಎಸ್.

ಅ) ರಾಜ್ಯದಾದ್ಯಂತ ಹೊಸದಾಗಿ ನ್ಯಾಯಬೆಲೆ ಅಂಗಡಿಗಳನ್ನು ತೆರೆಯುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಹೊಸ ನ್ಯಾಯಬೆಲೆ ಅಂಗಡಿ ಮಂಜೂರು ಮಾಡಲು ಸರ್ಕಾರ ನಿಗಧಿ ಪಡಿಸಿರುವ ಮಾನದಂಡಗಳೇನು (ಜಿಲ್ಲಾವಾರು ವಿವರ ನೀಡುವುದು);

ಆ) ಹೊಸ ನ್ಯಾಯಬೆಲೆ ಅಂಗಡಿಗಳನ್ನು ಮಂಜೂರು ಮಾಡುವ ಸಂದರ್ಭಗಳಲ್ಲಿ ನಿರುದ್ಯೋಗಿ ಯುವಕರಿಗೆ ಉದ್ಯೋಗ ಕಲ್ಪಿಸುವ ನಿಟ್ಟಿನಲ್ಲಿ ಅವರಿಗೆ ಅಧ್ಯತೆ ನೀಡಲಾಗುವುದೇ; ಹಾಗಿದಲ್ಲಿ, ಈ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಇ) ಈಗಿರುವ ನ್ಯಾಯಬೆಲೆ ಅಂಗಡಿಗಳಲ್ಲಿರುವ ಪಡಿತರ ಚೀಟಿಗಳ ಸಂಖ್ಯೆಗಳನ್ನು ನಿಗಧಿಪಡಿಸಿ ಇನ್ನೂಳಿಯುವ ಪಡಿತರ ಚೀಟಿಗಳನ್ನು ಒಳಗೊಂಡಂತೆ ಹೊಸದಾಗಿ ನಿರುದ್ಯೋಗಿ ಯುವಕರಿಗೆ ನ್ಯಾಯಬೆಲೆ ಅಂಗಡಿ ಮಂಜೂರು ಮಾಡಲು ಸರ್ಕಾರಕ್ಕಿರುವ ತೊಂದರೆಗಳೇನು;

ಈ) ನ್ಯಾಯಬೆಲೆ ಅಂಗಡಿಗಳನ್ನು ಮಂಜೂರು ಮಾಡುವ ಸಂದರ್ಭದಲ್ಲಿ ಸರ್ಕಾರ ಯಾವ ಮಾನದಂಡ ಆಧಾರಗಳ ಮೇಲೆ ಮಾಲೀಕರನ್ನು ಆಯ್ಕೆ ಮಾಡಲಾಗುವುದು?

ಶ್ರೀ ದಿನೇಶ್ ಗುಂಡೂರಾವ್ (ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು)

ಅ) ಕರ್ನಾಟಕ ಅವಶ್ಯಕ ವಸ್ತುಗಳ (ಸಾ.ವಿ.ಪ) ನಿಯಂತ್ರಣ ಆದೇಶ 1992ರನ್ವಯ ಗ್ರಾಮಾಂತರ ಪ್ರದೇಶದಲ್ಲಿ ಕನಿಷ್ಠ 300 ಪಡಿತರ ಚೀಟಿಗಳಿಗೆ ಮತ್ತು ನಗರ ಪ್ರದೆಶದಲ್ಲಿ ಕನಿಷ್ಠ 500 ಪಡಿತರ ಚೀಟಿಗಳಿಗೆ ನ್ಯಾಯಬೆಲೆ ಅಂಗಡಿ ತೆರೆಯಲು ಅವಕಾಶವನ್ನು ಕಲ್ಪಿಸಲಾಗಿದೆ. ರಾಜ್ಯದಲ್ಲಿ ಹೊಸ ನ್ಯಾಯಬೆಲೆ ಅಂಗಡಿ ಪ್ರಾರಂಭಿಸಲು ಕರ್ನಾಟಕ

ಆವಶ್ಯಕ ವಸ್ತುಗಳ (ಸಾ.ವಿ.ಪ) ನಿಯಂತ್ರಣ ಆದೇಶ 1992ರ ಉಪ ಬಂದಗಳು ಹಾಗೂ ಸರ್ಕಾರದಿಂದ ಕಾಲಕಾಲಕ್ಕೆ ಹೊರಡಿಸುವ ಮಾರ್ಗಸೂಚಿಗಳನ್ವಯ ಕ್ರಮವಹಿಸಲಾಗುತ್ತಿದೆ. ಇತ್ತೀಚೆಗೆ ದಿನಾಂಕ: 27–08–2014ರಂದು ಹೊರಡಿಸಲಾದ ತಿದ್ದುಪಡಿ ಆದೇಶದಲ್ಲಿ ನ್ಯಾಯಬೆಲೆ ಅಂಗಡಿಗಳನ್ನು ಸಹಕಾರ ಸಂಘಗಳಿಗೆ ಹಾಗೂ ಸ್ತ್ರೀ ಶಕ್ತಿ ಮತ್ತು ಸ್ವ–ಸಹಾಯ ಸಂಘಗಳಿಗೆ ನೀಡಲು ಅವಕಾಶವನ್ನು ಕಲ್ಪಿಸಲಾಗಿದೆ. ರಾಜ್ಯವ್ಯಾಪಿ ಏಕ ಪ್ರಕಾರ ಮಾನದಂಡಗಳನ್ನು ಜಾರಿಗೊಳಿಸಲಾಗಿದೆ.

ಆ) ದಿನಾಂಕ: 27–08–2014ರಂದು ಹೊರಡಿಸಲಾದ ಆದೇಶದಲ್ಲಿ ಸಹಕಾರ ಸಂಘಗಳಿಗೆ ಮತ್ತು ಸ್ತ್ರೀ ಶಕ್ತಿ ಮತ್ತು ಸ್ವ–ಸಹಾಯ ಸಂಘಗಳಿಗೆ ಮಾತ್ರ ನ್ಯಾಯಬೆಲೆ ಅಂಗಡಿ ತೆರೆಯಲು ಅವಕಾಶವನ್ನು ಕಲ್ಪಿಸಲಾಗಿದೆ. ನಿರುದ್ಯೋಗಿ ಯುವಕರಿಗೆ ಆಧ್ಯತೆ ನೀಡಲು ನಿಯಮಾವಳಿಗಳಲ್ಲಿ ಅವಕಾಶವಿರುವುದಿಲ್ಲ.

ಇ) ಮೇಲಿನಂತೆ

ಈ) ಪ್ರಸ್ತುತ ನ್ಯಾಯಬೆಲೆ ಅಂಗಡಿಗಳನ್ನು ಮಂಜೂರು ಮಾಡುವಾಗ ಸಹಕಾರ ಸಂಘಗಳು, ಸ್ತ್ರೀ ಶಕ್ತಿ ಮತ್ತು ಸ್ವ–ಸಹಾಯ ಸಂಘಗಳಿಗೆ ಮಾತ್ರ ನ್ಯಾಯಬೆಲೆ ಅಂಗಡಿ ನೀಡಲು ಅವಕಾಶವನ್ನು ಕಲ್ಪಿಸಲಾಗಿದೆ.

ಉಚಿತ ವೈ–ಫೈ ಪ್ರಾರಂಭಿಸುವುದು

432(949); ಡಾ॥ ಶಿವರಾಜ್ ಪಾಟೀಲ್. ಎಸ್. (ರಾಯಚೂರು ನಗರ)

ಅ) ರಾಜ್ಯದಲ್ಲಿ ಉಚಿತವಾಗಿ ವೈ–ಫೈ ಪ್ರಾರಂಭಿಸುವ ಯೋಜನೆಯ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಪ್ರಾರಂಭಿಕವಾಗಿ ಈ ಯೋಜನೆಯನ್ನು ಯಾವ ಯಾವ ನಗರಗಳಲ್ಲಿ ಹಾಗೂ ಸ್ಥಳಗಳಲ್ಲಿ ಜಾರಿಗೆ ತರಲಾಗುವುದು;